3

# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು

## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE 26/5/2020

## ರಾಜ್ಯಸಭೆ ಚುನಾವಣೆ ಸಿದತೆ

ಸಂ.ಕ. 26-5-2020

ನವದೆಹಲಿ: ಕೊರೊನಾ ಹಾವಳಿಯಿಂದಾಗಿ ಮುಂದೂಡಲಾಗಿದ್ದ ದೇಶದ 7 ರಾಜ್ಯಗಳ 18 ರಾಜ್ಯಸಭಾ ಸ್ಥಾನಗಳಿಗೆ ಚುನಾವಣೆ ನಡೆಸುವ ಬಗ್ಗೆ ಪರಿಶೀಲಿಸುವಂತೆ ಉಪರಾಷ್ಟ್ರಪತಿ ವೆಂಕಯ್ಯನಾಯ್ಡು ಚುನಾವಣಾ ಆಯೋಗಕ್ಕೆ ಸಂದೇಶ ರವಾನಿಸಿದ್ದಾರೆ. ಇದೇ ವೇಳೆ ಅವಿರೋಧವಾಗಿ ಆಯ್ಕೆಯಾಗಿರುವ 37 ಹೊಸ ಸದಸ್ಯರ ಪ್ರಮಾಣವಚನ ಸ್ವೀಕಾರಕ್ಕೆ ಕಾರ್ಯಕ್ರಮ ನಿಗದಿಪಡಿಸುವಂತೆ ಅವರು ರಾಜ್ಯಸಭಾ ಸಚಿವಾಲಯಕ್ಕೆ ಸೂಚಿಸಿದ್ದಾರೆ.

ವಿಮಾನ ಮತ್ತು ರೈಲು ಸಂಚಾರ ಪುನರಾರಂಭವಾಗಿರುವ ಹಿನ್ನೆಲೆಯಲ್ಲಿ ಸಂಸದೀಯ ಸ್ಥಾಯಿ ಸಮಿತಿಗಳ ಸಭೆಗಳನ್ನು ನಡೆಸುವ ಬಗ್ಗೆಯೂ ಅಗತ್ಯ ಪೂರ್ವಸಿದ್ಧತೆ ಮಾಡಿಕೊಳ್ಳುವಂತೆ ಸಂಸತ್ತಿನ ಉಭಯ ಸದನಗಳ ಕಾರ್ಯದರ್ಶಿಗಳಿಗೆ ನಿರ್ದೇಶಿಸಲಾಗಿದೆ. ಈ ಸಂಬಂಧ ವೆಂಕಯ್ಯನಾಯ್ಡು ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಮತ್ತು ಸಂಸದೀಯ ವ್ಯವಹಾರ ಸಚಿವ ಪ್ರಹ್ಲಾದ್ ಜೋಶಿಯವರ ಜೊತೆಗೂ ಈಗಾಗಲೇ ಸಮಾಲೋಚನೆ ನಡೆಸಿದ್ದಾರೆ.